ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು-01.
ದೂರವಾಣಿ ಸಂಖ್ಯೆ : 080-22372738, E-mail: karnregs@gmail.com

ಗ್ರಾಅಪ 276 ಉಖಾಯೋ 2017 ದಿನಾಂಕ: 01-08-2017

# ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿ ಹಂತದಲ್ಲಿ ಎದುರಿಸುತ್ತಿರುವ ಸಮಸ್ಯೆಗಳು ವಿವಿಧ ಬೇಡಿಕೆಗಳನ್ನು ಪರಿಹರಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಪತ್ರದ ಸಂಖ್ಯೆ: ಗ್ರಾಅಪ 309 ಗ್ರಾಪಂಕಾ 2017 ದಿನಾಂಕ: 18-07-2017

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಗ್ರಾಮ ಪಂಚಾಯತಿ ಹಂತದಲ್ಲಿ ಎದಿರುಸುತ್ತಿರುವ ಸಮಸ್ಯೆಗಳು ಮತ್ತು ವಿವಿಧ ಬೇಡಿಕೆಗಳ ಬಗ್ಗೆ ದಿನಾಂಕ: 16-05-2017 ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂಚಾಯತ್ ರಾಜ್) ಇವರ ಅಧ್ಯಕ್ಷತೆಯಲ್ಲಿ ನಡೆದಿರುವ ಸಭೆಯ ನಡವಳಿಯನ್ನು ಉಲ್ಲೇಖಿತ ಪತ್ರದಲ್ಲಿ ಲಗತ್ತಿಸಿದ್ದು, ನಡವಳಿಯ ಪ್ರತಿಯೊಂದು ಅಂಶಕ್ಕೆ ಅನುಪಾಲನಾ ವರದಿಯನ್ನು ನೀಡುವಂತೆ ಕೋರಿದ್ದು, ಅದರಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ e-NMRಗಳನ್ನು ಸೃಜಿಸುವುದು ಮತ್ತು ಹಣ ಪಾವತಿಸುವುದನ್ನು ಕಛೇರಿ ಸಮಯದೊಳಗೆ ಮಾತ್ರ ನಿಗದಿಪಡಿಸಿ ಸುತ್ತೋಲೆ ಹೊರಡಿಸುವ ಬೇಡಿಕೆ ಇರುತ್ತದೆ.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಹಂತ ಹಂತವಾಗಿ ಅನುಷ್ಠಾನಗೊಳಿಸುತ್ತಾ ಬರಲಾಗಿದೆ. ಕಾಮಗಾರಿಗಳ ಅನುಷ್ಠಾನವನ್ನು ಸ್ಥಳೀಯ ಬೇಡಿಕೆಗೆ ಅನುಗುಣವಾಗಿ ನಿರ್ವಹಿಸಲಾಗುತ್ತಿದೆ. ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಕಾರ್ಮಿಕರಿಗೆ ಗ್ರಾಮ ಪಂಚಾಯತಿಯ ನೌಕರರ ಬೇಡಿಕೆಗೆ ಪೂರಕವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ನಿರ್ದೇಶಿಸಿದಂತೆ e-NMR ಸೃಜನೆಗೆ ಮತ್ತು ಹಣ ಪಾವತಿಗೆ ಸಂಬಂಧಿಸಿದಂತೆ ಹೆಚ್ಚಿನ ಪಾರದರ್ಶಕತೆಯನ್ನು ತರಲು ಈ ಕೆಳಕಂಡಂತೆ ಕ್ರಮ ಕೈಗೊಳ್ಳಲು ಸೂಚಿಸಲಾಗಿದೆ.

1. ಕಾಮಗಾರಿಯ ಅನುಷ್ಠಾನದಲ್ಲಿ ತೊಡಗಿರುವ ಕೂಲಿ ಕಾರ್ಮಿಕರಿಗೆ e-NMRಗಳ ಸೃಜನೆ ಹಾಗೂ ಅವರ ಕೂಲಿ ಹಣ ಪಾವತಿಯನ್ನು ಸರ್ಕಾರವು ನಿಗಧಿಪಡಿಸಿದ ಕಛೇರಿ ಸಮಯದೊಳಗೆ ಮಾಡುವುದು.
2. ಕಾಮಗಾರಿಗಳಿಗೆ ಸಂಬಂಧಿಸಿದ ಸಾಮಗ್ರಿ ವೆಚ್ಚದ ಸಂದಾಯವನ್ನು ಸರಬರಾಜುದಾರರಿಗೆ/ವೆಂಡರ್‌ಗಳಿಗೆ ಸರ್ಕಾರವು ನಿಗಧಿಪಡಿಸಿದ ಕಛೇರಿ ಸಮಯದೊಳಗೆ ಮಾಡುವುದು.
3. ಇದೆ ರೀತಿ ರಾಜ್ಯ ಮಟ್ಟದಲ್ಲಿ ಸಾಮಗ್ರಿ ವೆಚ್ಚ ಮತ್ತು ಆಡಳಿತಾತ್ಮಕ ವೆಚ್ಚಗಳಿಗೆ ಸಂಬಂಧಿಸಿದಂತೆ ಅನುದಾನವನ್ನು ಆನ್‌ಲೈನ್ ಮೂಲಕ ಸರ್ಕಾರವು ನಿಗಧಿಪಡಿಸಿದ ಕಛೇರಿ ಸಮಯದೊಳಗೆ ಬಿಡುಗಡೆ ಮಾಡುವುದು.

ಮೇಲೆ ಸೂಚಿಸಿದ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದು.

ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು
3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು/ಕಾರ್ಯದರ್ಶಿಗಳು

**ಪ್ರತಿಯನ್ನು ಈ ಕೆಳಕಂಡವರ ಮಾಹಿತಿಗಾಗಿ ಸಲ್ಲಿಸಿದೆ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು.
4. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ನಿರ್ದೇಶಕರು, ಪಂಚಾಯತ್ ರಾಜ್ 1 ಮತ್ತು 2, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
7. ನಿರ್ದೇಶಕರು, ಸಾಮಾಜಿಕ ಪರಿಶೋಧನೆ, ಕೊಳಚೆ ನಿರ್ಮೂಲನ ಮಂಡಳಿ, ರಿಸಾಲ್ ದಾರ್ ರಸ್ತೆ, ಬೆಂಗಳೂರು.
8. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಜಂಟಿ ನಿರ್ದೇಶಕರು (ತಾಂತ್ರಿಕ), ಆಡಳಿತ, ತೋಟಗಾರಿಕೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ಗ್ರಾಮೀಣಾಭಿವೃದ್ಧಿ ಆಯುಕ್ತಾಲಯದ ಎಲ್ಲಾ ಅಧಿಕಾರಿಗಳಿಗೆ
11. MIS ಶಾಖೆಯ ಕಾರ್ಯಕ್ರಮ ವ್ಯವಸ್ಥಾಪಕರು 1 ಮತ್ತು 2 ಹಾಗೂ ಸಿಬ್ಬಂದಿಗಳಿಗೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
12. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
13. ವಿಶೇಷಾಧಿಕಾರಿ, ಗಣಕಕೋಶ, ಗ್ರಾಅಪ ಇಲಾಖೆ. ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
14. ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
15. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
16. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ